5% Reservation for students.

1 86 ಅನುಬಂಧ - 08

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಆದ್ಯತೆ ನೀಡುವ ಬಗ್ಗೆ.

ಓದಲಾಗಿದೆ:- ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರ ಏಕಕಡತ ಸಂಖ್ಯೆ:ಕರಾಸಕಆ /ಸಿಆರ್-02/2016-17, ದಿನಾಂಕ:11-04-2017

***

ಪ್ರಸ್ತಾವನೆ:-

ಮೇಲೆ ಓದಲಾದ ಏಕಕಡತದಲ್ಲಿನ ಪ್ರಸ್ತಾವನೆಯಲ್ಲಿ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಆದ್ಯತೆ ನೀಡುವ ಬಗ್ಗೆ 2017-18ನೇ ಆಯವ್ಯಯದಲ್ಲಿ ಕಂಡಿಕೆ-173ರಲ್ಲಿ ಘೋಷಣೆಯಾಗಿದ್ದು, ಅದರಂತೆ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

2017-18ನೇ ಸಾಲಿನ ಆಯವ್ಯಯ ಘೋಷಣೆ ಕೆಳಕಂಡಂತಿದೆ.

ಕಂಡಿಕೆ ಸಂಖ್ಯೆ: 173 ರಲ್ಲಿ "ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಆದ್ಯತೆ ನೀಡಲಾಗುವುದು".

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಅದರಂತೆ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 141 ಎಸ್‌ಡಿಸಿ 2017,**

**ಬೆಂಗಳೂರು ದಿನಾಂಕ:22-04-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಒಟ್ಟು ಸೀಟುಗಳಲ್ಲಿ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಶೇ.5% ಸೀಟುಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರ ದಾಖಲಾತಿ ನೀಡುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಆದೇಶ ಹೊರಡಿಸಿದೆ.

ಷರತ್ತುಗಳು:

(1) ಸಫಾಯಿ ಕರ್ಮಚಾರಿಗಳು ಖಾಯಂ ಆಗಿ ಅಥವಾ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳು/ಕೇಂದ್ರ ಮತ್ತು ರಾಜ್ಯ ಸರ್ಕಾರದ ಇಲಾಖೆ/ನಿಗಮ/ಮಂಡಳಿ/ಇತರೆ ಸಂಸ್ಥೆಗಳು ಮತ್ತು ಖಾಸಗಿ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕರ್ಮಚಾರಿಗಳಾಗಿರತಕ್ಕದ್ದು.

(2) ಸಫಾಯಿ ಕರ್ಮಚಾರಿಗಳ ಮಕ್ಕಳು ಸದರಿ ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯಲು ಅವರ ಪೋಷಕರು ಸಂಬಂಧಿಸಿದ ನಗರ/ ಸ್ಥಳೀಯ ಸಂಸ್ಥೆಗಳ ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿ/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಿಂದ ಅಗತ್ಯ ಪ್ರಮಾಣ ಪತ್ರವನ್ನು

ಹಾಜರುಪಡಿಸತಕ್ಕದ್ದು. ಖಾಸಗಿ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಫಾಯಿ ಕರ್ಮಚಾರಿಗಳು ಸಹ ಮೇಲ್ಕಂಡ ಅಧಿಕಾರಿಗಳಿಂದ ಅಗತ್ಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

ಒಂದು ವೇಳೆ ಸಫಾಯಿ ಕರ್ಮಚಾರಿಗಳ ಮಕ್ಕಳು ಪ್ರವೇಶ ಪಡೆಯಲು ಲಭ್ಯವಿಲ್ಲದಿದ್ದಲ್ಲಿ, ಸದರಿ ಸೀಟುಗಳನ್ನು ಇತರೆ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಎನ್.ಸುಮತಿ) 22/4/17
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಸರ್ಕಾರದ ಅಪರ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು
ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು
ನಿರ್ದೇಶಕರು, ಪೌರಾಡಳಿತ ಇಲಾಖೆ, ಬೆಂಗಳೂರು
ಎಲ್ಲಾ ಜಿಲ್ಲಾಧಿಕಾರಿಗಳಿಗೆ
ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು (ಮೇಲ್ಕಂಡ ಮಕ್ಕಳ ಪ್ರವೇಶಕ್ಕಾಗಿ ಸೂಕ್ತ ವ್ಯವಸ್ಥೆ ಮತ್ತು ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ ತಿಳಿಸತಕ್ಕದ್ದು).
ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು
ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.